ದಿ: 11/08/2025
156ನೇ ಕ್ರ.ಸಂ: 72 = (18)

(2)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಐವನ್ ಡಿ'ಸೋಜಾ ಇವರು ನಿಯಮ 72 ರಡಿ ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ಅರಣ್ಯ ವಿಭಾಗದಲ್ಲಿ ಆನೆಗಳ ಸಂಖ್ಯೆ ಹೆಚ್ಚುತ್ತಿದ್ದು, ಆನೆ ಸಂಘರ್ಷವನ್ನು ತಡೆಯಲು "ಎಲಿಪೆಂಟ್ ಟಾಕ್ಸ್ ಫೋರ್ಸ್" ನ್ನು ರಚಿಸದೇ ಮಾನವ ಜೀವಗಳನ್ನು ಕಳೆದುಕೊಳ್ಳುತ್ತಿರುವುದರಿಂದಲೇ, ಭಯದ ವಾತಾವರಣದಿಂದ ಜನರು ಬದುಕುತ್ತಿರುವುದರಿಂದ ಟಾಸ್ಕ್ ಫೋರ್ಸ್ ರಚಿಸಿ, ಮೂಲಭೂತ ಸೌಕರ್ಯಗಳನ್ನು ಒದಗಿಸಲು ಮತ್ತು ಖಾಲಿ ಇರುವ ಸಿಬ್ಬಂದಿಗಳನ್ನು ನೇಮಿಸುವ ವಿಷಯದ ಕುರಿತು ಗಮನ ಸೆಳೆಯುವ ಸೂಚನೆಗೆ ಸನ್ಮಾನ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರ ಹೇಳಿಕೆ.**

*******

ರಾಜ್ಯದಲ್ಲಿ ಮಾನವ – ಆನೆ ಸಂಘರ್ಷ ಅತೀ ಹೆಚ್ಚಾಗಿರುವ ಜಿಲ್ಲೆಗಳಾದ ಹಾಸನ, ಚಿಕ್ಕಮಗಳೂರು, ಕೊಡಗು, ಹುಣಸೂರು, ಚಾಮರಾಜನಗರ, ರಾಮನಗರ, ಬನ್ನೇರುಘಟ್ಟ ಹಾಗೂ ಬಂಡೀಪುರಗಳಲ್ಲಿ ಸರ್ಕಾರದ ಆದೇಶದನ್ವಯ ಒಟ್ಟು 8 ಆನೆ ಕಾರ್ಯಪಡೆಗಳನ್ನು ರಚಿಸಲಾಗಿರುತ್ತದೆ.

ಮಾನವ-ಆನೆ ಸಂಘರ್ಷ ಕಂಡುಬರುವ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 7 ಆನೆ ಹಿಮ್ಮೆಟ್ಟಿಸುವ ತಂಡಗಳು ಕಾರ್ಯನಿರ್ವಹಿಸುತ್ತಿದ್ದು, ಸದರಿ ತಂಡಗಳು ನಿರಂತರ ಗಸ್ತು ಕಾರ್ಯ ಕೈಗೊಂಡು ಆನೆ ಹಾವಳಿ ಕಂಡುಬಂದಾಗ ತಕ್ಷಣ ಸ್ಪಂದಿಸಿ ಸಂಘರ್ಷ ನಿಯಂತ್ರಿಸುವಲ್ಲಿ ಅಗತ್ಯ ಕ್ರಮ ವಹಿಸುತ್ತಿವೆ.

ಸ್ಥಳೀಯ ಗ್ರಾಮಸ್ಥರಿಗೆ ಮೂಲಭೂತ ಸೌಕರ್ಯಗಳಾದ ಬೀದಿ ದೀಪಗಳು, ಶೌಚಾಲಯ ವ್ಯವಸ್ಥೆ ಗಳನ್ನು ಸಂಬಂಧಿಸಿದ ಜಿಲ್ಲಾಡಳಿತ ವತಿಯಿಂದ ಒದಗಿಸಬೇಕಾಗಿರುತ್ತದೆ.

1. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಾಡಾನೆಗಳು ಅರಣ್ಯದಿಂದ ಗ್ರಾಮಗಳಿಗೆ ಪ್ರವೇಶಿಸುವುದನ್ನು ತಡೆಗಟ್ಟಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

    1. ಆನೆ ನಿರೋಧಕ ಕಂದಕ ನಿರ್ಮಿಸಲಾಗಿದೆ, ಹಳ್ಳ,ತೊರೆಗಳು ಬರುವಲ್ಲಿ ವಿಶೇಷ ವಿನ್ಯಾಸದ ಕಾಂಕ್ರಿಟ್ ರಚನೆ ಮತ್ತು ಸೋಲಾರ್ ಟೆಂಟಕಲ್ ಬೇಲಿಯ ನಿರ್ಮಾಣ ಕಾರ್ಯ ಕೈಗೊಳ್ಳಲಾಗಿದೆ.
    2. ಇಲಾಖಾ ಸಿಬ್ಬಂದಿಗಳಿಂದ ನಿರಂತರವಾಗಿ ಗಸ್ತು ಸಂಚರಿಸಿ ಕಾಡಾನೆಯು ಗ್ರಾಮಗಳಿಗೆ ದಾಳಿ ಮಾಡಿದಾಗ ಮರಳಿ ಅರಣ್ಯಕ್ಕೆ ಹಿಮ್ಮೆಟ್ಟಿಸುವ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ.
    3. ಅರಣ್ಯದ ಅಂಚಿನಲ್ಲಿ ಬರುವ ಖಾಸಗಿ ಜಮೀನುಗಳ ಸುತ್ತ ಸರಕಾರದ ವತಿಯಿಂದ ದೊರಕುವ ಶೇ. 50 ಸಬ್ಸಿಡಿಯನ್ನು ಬಳಸಿಕೊಂಡು ಸೌರಶಕ್ತಿಬೇಲಿಯನ್ನು ನಿರ್ಮಿಸಲಾಗುತ್ತಿದೆ.
    4. ಅರಣ್ಯ ರಕ್ಷಣೆ ಕ್ಯಾಂಪಿನ ಸಿಬ್ಬಂದಿಗಳನ್ನು ಆನೆಹಾವಳಿ ಸಮಯದಲ್ಲಿ ತೊಡಗಿಸಿಕೊಳ್ಳಲಾಗುತ್ತಿದೆ.
    5. ಕಾಡಾನೆ ಹಾವಳಿ ಇರುವ ಗ್ರಾಮಗಳಲ್ಲಿ ಸ್ಥಳೀಯ ಗ್ರಾಮಸ್ಥರ, ಅಧಿಕಾರಿಗಳ ಸಿಬ್ಬಂದಿಗಳ ವಾಟ್ಸಪ್ ಗ್ರೂಪ್ ರಚಿಸಿ, ಆನೆ ಹಾವಳಿ ಬಗ್ಗೆ ಸಂದೇಶವನ್ನು ಸ್ಥಳೀಯರಿಗೆ ರವಾನಿಸಲು ಕ್ರಮ ಕೈಗೊಳ್ಳಲಾಗಿದೆ.
    6. ಆನೆ ಸಂಚರಿಸುವ ಪ್ರದೇಶಗಳಲ್ಲಿ ಸೂಚನಾ ಫಲಕವನ್ನು ಅಳವಡಿಸಲಾಗುತ್ತಿದೆ.

2. ರಾಜ್ಯದಲ್ಲಿ ಮಾನವ- ಆನೆ ಸಂಘರ್ಷ ಉಂಟಾಗುವ ಸಂದರ್ಭಗಳಲ್ಲಿ ಕಾಡಾನೆಗಳನ್ನು ಸೆರೆಹಿಡಿಯುವ ಕಾರ್ಯಾಚರಣೆಗಾಗಿ ದುಬಾರೆ, ಮತ್ತಿಗೋಡು, ಬಳ್ಳೆ, ಹಾರಂಗಿ, ಭೀಮನಕಟ್ಟೆ ಸಕ್ರೈಬೈಲು ಮತ್ತು ರಾಮಾಪುರ ಆನೆ ಶಿಬಿರಗಳಲ್ಲಿನ ಪಳಗಿದ ಆನೆಗಳನ್ನು ಬಳಸಿಕೊಂಡು ನುರಿತ ಪಶುವೈದ್ಯಾಧಿಕಾರಿ, ಮಾವುತ ಹಾಗೂ ಇತರೆ ಸಿಬ್ಬಂದಿಗಳೊಳಗೊಂಡ ಮೂರು ತಂಡಗಳನ್ನು ರಚಿಸಲಾಗಿರುತ್ತದೆ. ಸದರಿ ತಂಡವು ರಾಜ್ಯದ ಯಾವುದೇ ಭಾಗದಿಂದ ಕಾಡಾನೆ ಸೆರೆಹಿಡಿಯುವ ಕಾರ್ಯಾಚರಣೆಗೆ ಬೇಡಿಕೆ ಬಂದಾಗ ಈ ತಂಡಗಳಲ್ಲಿಒಂದು ತಂಡವನ್ನು ಕಾರ್ಯಾಚರಣೆಗೆ ನಿಯೋಜಿಸಲಾಗುತ್ತಿದೆ.

3. ಮಾನವ- ಆನೆ ಸಂಘರ್ಷಹೆಚ್ಚಿರುವ 10 ಜಿಲ್ಲೆಗಳಲ್ಲಿ" **ಅನೆ ಎಲ್ಲಿ**" ಎಂಬ ತಂತ್ರಜ್ಞಾನ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ. ಈ ವ್ಯವಸ್ಥೆಯು ಸಾರ್ವಜನಿಕ ದೂರುಗಳು, ಗಸ್ತುತಿರುಗುವಿಕೆ ಮುಂತಾದ ವಿವಿಧ ಮಾಹಿತಿಗಳ ಮೂಲಕ ಒಂದು ಪ್ರದೇಶದಲ್ಲಿ ಆನೆಗಳ ಚಲನವಲನವನ್ನು ಮೇಲ್ವಿಚಾರಣೆ ಮಾಡುತ್ತದೆ. ಈ ಮಾಹಿತಿಯು ಆನೆಗಳ ಚಲನವಲನದ ಮಾದರಿಯನ್ನು ಪತ್ತೆ ಹಚ್ಚಲು ಮತ್ತು ಸಾರ್ವಜನಿಕರಿಗೆ ಮುಂಚಿನ ಎಚ್ಚರಿಕೆ ಸಂದೇಶಗಳನ್ನು ಕಳುಹಿಸಲು ಸಹಾಯ ಮಾಡುತ್ತಿದೆ.

4. ಸದರಿ ತಂತ್ರಜ್ಞಾನವನ್ನು ದಕ್ಷಿಣ ಕನ್ನಡ ಜಿಲ್ಲೆಯಲ್ಲೂ ವಿಸ್ತರಿಸಲು ಅವಶ್ಯ ಕ್ರಮ ಕೈಗೊಳ್ಳಲಾಗುತ್ತಿದೆ.

5. ಮಂಗಳೂರು ಅರಣ್ಯ ವಿಭಾಗದಲ್ಲಿ ಮುಂಚೂಣಿ ಸಿಬ್ಬಂದಿಗಳ ವೃಂದಗಳಲ್ಲಿ ಮಂಜೂರಾದ, ಭರ್ತಿಯಾದ ಹಾಗೂ ಖಾಲಿ ಇರುವ ಹುದ್ದೆಗಳ ವಿವರ ಈ ಕೆಳಗಿನಂತಿದೆ.

| ವೃಂದ/ ಹುದ್ದೆಯ ಪ್ರವರ್ಗ | ಮಂಜೂರಾದ ಹುದ್ದೆಗಳು | | | | ಭರ್ತಿಯಾದ ಹುದ್ದೆಗಳು | | | | ಖಾಲಿ ಇರುವ ಹುದ್ದೆಗಳು | | | |
|---|---|---|---|---|---|---|---|---|---|---|---|---|
| | ಪ್ರವರ್ಗ 'ಎ' | ಪ್ರವರ್ಗ 'ಬಿ' | ಪ್ರವರ್ಗ 'ಸಿ' | ಒಟ್ಟು | ಪ್ರವರ್ಗ 'ಎ' | ಪ್ರವರ್ಗ 'ಬಿ' | ಪ್ರವರ್ಗ 'ಸಿ' | ಒಟ್ಟು | ಪ್ರವರ್ಗ 'ಎ' | ಪ್ರವರ್ಗ 'ಬಿ' | ಪ್ರವರ್ಗ 'ಸಿ' | ಒಟ್ಟು |
| ಉಪ ವಲಯ ಅರಣ್ಯ ಅಧಿಕಾರಿ-ಕಂ-ಮೋಜಣಿದಾರ | 35 | 13 | 43 | **91** | 35 | 13 | 22 | **70** | 0 | 0 | 21 | **21** |
| ಗಸ್ತು ಅರಣ್ಯ ಪಾಲಕ (ಅರಣ್ಯ ರಕ್ಷಕ) | 29 | 22 | 125 | **176** | 29 | 17 | 38 | **84** | 0 | 5 | 87 | **92** |
| ಅರಣ್ಯ ವೀಕ್ಷಕ | 29 | 6 | 27 | **62** | 1 | 4 | 0 | **5** | 28 | 2 | 27 | **57** |

- ಈ ಮೇಲೆ ನಮೂದಿಸಿರುವ ಪ್ರವರ್ಗ 'ಬಿ' ಮತ್ತು ಪ್ರವರ್ಗ 'ಸಿ' ಹುದ್ದೆಗಳು ನೇರವಾಗಿ ಕ್ಷೇತ್ರ ಮಟ್ಟದಲ್ಲಿ ಅರಣ್ಯ ಮತ್ತು ವನ್ಯಜೀವಿ ಸಂಪತ್ತನ್ನು ರಕ್ಷಿಸುವ ಜವಾಬ್ದಾರಿ ಹೊಂದಿರುತ್ತವೆ. ಪ್ರವರ್ಗ 'ಎ' ಹುದ್ದೆಗಳು ಕಚೇರಿ ಕರ್ತವ್ಯ/ ಮಾಹಿತಿ ಸಂವಹನ ತಂತ್ರಜ್ಞಾನ/ ನಿಸ್ತಂತು ಹಾಗೂ ಶಸ್ತ್ರ ನಿರ್ವಹಣೆ/ ಸರ್ಕಾರಿ ಮರಮಟ್ಟು ಸಂಗ್ರಹಾಲಯ, ಮುಂತಾದ ಇತರೆ ರೀತಿಯ ಕರ್ತವ್ಯಗಳನ್ನು ಹೊಂದಿರುವ ಹುದ್ದೆಗಳು ಆಗಿರುತ್ತವೆ.

- ಉಪ ವಲಯ ಅರಣ್ಯ ಅಧಿಕಾರಿ-ಕಂ-ಮೋಜಣಿದಾರ ಮತ್ತು ಗಸ್ತು ಅರಣ್ಯ ಪಾಲಕ (ಅರಣ್ಯ ರಕ್ಷಕ) ವೃಂದಗಳಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳ ಪೈಕಿ ಶೇ. 50 ರಷ್ಟು ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಹಾಗೂ ಉಳಿದ ಶೇ. 50 ರಷ್ಟು ಹುದ್ದೆಗಳನ್ನು ಕೆಳಗಿನ ವೃಂದದಿಂದ ಮುಂಬಡ್ತಿ ಮೂಲಕ ಭರ್ತಿ ಮಾಡಬೇಕಾಗಿರುತ್ತದೆ. ಅದೇ ರೀತಿ ಅರಣ್ಯ ವೀಕ್ಷಕ ವೃಂದದಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳ ಪೈಕಿ ಶೇ. 75 ರಷ್ಟು ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಹಾಗೂ ಉಳಿದ ಶೇ. 25 ರಷ್ಟು ಹುದ್ದೆಗಳನ್ನು ಇತರೆ ಗ್ರೂಪ್ 'ಡಿ' ಸಿಬ್ಬಂದಿಗಳ ಮುಂಬಡ್ತಿ ಮೂಲಕ ಭರ್ತಿ ಮಾಡಬೇಕಾಗಿರುತ್ತದೆ.

- ಉಪ ವಲಯ ಅರಣ್ಯ ಅಧಿಕಾರಿ-ಕಂ-ಮೋಜಣಿದಾರ ವೃಂದದಲ್ಲಿ ಖಾಲಿ ಇರುವ ಪ್ರವರ್ಗ 'ಸಿ' ಹುದ್ದೆಗಳ ಜವಾಬ್ದಾರಿಯನ್ನು ಈಗಾಗಲೇ ಕಾರ್ಯ ನಿರ್ವಹಿಸುತ್ತಿರುವ ಉಪ ವಲಯ ಅರಣ್ಯ ಅಧಿಕಾರಿ-ಕಂ-ಮೋಜಣಿದಾರರಿಗೆ ವಹಿಸಲಾಗಿರುತ್ತದೆ.

- ಗಸ್ತು ಅರಣ್ಯ ಪಾಲಕ (ಅರಣ್ಯ ರಕ್ಷಕ) ವೃಂದದಲ್ಲಿ ಖಾಲಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕ್ರಮವಹಿಸಲಾಗಿರುತ್ತದೆ. ಅದರಲ್ಲಿ ಮಂಗಳೂರು ಅರಣ್ಯ ವಿಭಾಗಕ್ಕೆ ಸಂಬಂಧಿಸಿದ 21 ಗಸ್ತು ಅರಣ್ಯ ಪಾಲಕ (ಅರಣ್ಯ ರಕ್ಷಕ) ಹುದ್ದೆಗಳು ಸಹ ಸೇರಿರುತ್ತವೆ.

- ಅರಣ್ಯ ವೀಕ್ಷಕ ವೃಂದದಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಪ್ರಕ್ರಿಯೆ ಶೀಘ್ರವೇ ಮುಕ್ತಾಯಗೊಳ್ಳಲಿದೆ.

**ಇ-ಸಂಖ್ಯೆ: ಅಪಜೀ 171 ಎಫ್‌ಡಬ್ಲ್ಯೂಎಲ್ 2025**

(signature)

**(ಈಶ್ವರ ಬಿ. ಖಂಡ್ರೆ)**

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು